ಶ್ರೀ ಜಿ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ ಮತ್ತು ನೀರಾವರಿ ಸಚಿವರು).—

ಅ) ರೂ. ೧೭೫.೦೦ ಲಕ್ಷಗಳು.

ಆ) ೧೯೮೯-೯೦ ಅಂತ್ಯದವರೆಗೂ ರೂ. ೨೦೨.೦೦ ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಇದುವರೆವಿಗೂ ರೂ. ೧೭೨.೫೦ ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

ಇ) ನವೀಕರಣ ಕಾರ್ಯವನ್ನು ಹಂತ ಹಂತವಾಗಿ ತೆಗೆದುಕೊಳ್ಳಲಾಗುತ್ತಿದೆ. ಉಚ್ಚ ನ್ಯಾಯಾಲಯ ಮತ್ತು ಅದರ ಕಛೇರಿಗಳು ಈ ಕಟ್ಟಡದ ನವೀಕರಣ ಕಾರ್ಯ ನಡೆಯುತ್ತಿರುವ ಹಾಗೆಯೇ ಕಾರ್ಯನಿರ್ವಹಿಸಬೇಕಾಗಿರುವ ಕಾರಣ ಕೆಲಸವು ನಿಧಾನ ಪ್ರಗತಿಯಲ್ಲಿ ಸಾಗುತ್ತಿದೆ.

ಈ ಹಣದ ಲಭ್ಯತೆಯನ್ನು ಆಧರಿಸಿ ಈ ಕಾರ್ಯದ ಉಳಿಕೆ ಕೆಲಸವನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಬೆಳಗಾಂ ಜಿಲ್ಲೆಯ ಶ್ರೀ ಸೊಗಲ ಕ್ಷೇತ್ರದಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಶೌಚಾಲಯ ನಿರ್ಮಿಸುವ ಕುರಿತು

೪೮೨. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾಂ ಜಿಲ್ಲೆಯ ಶ್ರೀ ಕ್ಷೇತ್ರ ಸೊಗಲದಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ದಿನಾಂಕ ೨೫-೩-೮೯ರಂದು ಶೌಚಾಲಯ ಕಟ್ಟಲು ಸರ್ಕಾರದ ಆಜ್ಞೆ ಹೊರಡಿಸಲಾಗಿದೆಯೇ ?

ಆ) ಹಾಗಿದ್ದಲ್ಲಿ, ಈ ಕೆಲಸಕ್ಕೆ ಈಗ ಎಷ್ಟು ಖರ್ಚಾಗಿದೆ, ಮತ್ತು ಈ ಕೆಲಸವು ಯಾವ ಹಂತದಲ್ಲಿದೆ ;

ಇ) ಈ ಕೆಲಸ ಪೂರ್ಣಗೊಳ್ಳಲು ಇನ್ನೂ ಎಷ್ಟು ಕಾಲಾವಕಾಶ ಬೇಕಾಗುವುದು ?

ಶ್ರೀ ಎಂ. ವೀರಪ್ಪ ಮೊಯಿಲಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವರು).—

೧ ಹೌದು

೨ ಈವರೆವಿಗೂ ಕೆಲಸವನ್ನು ಪ್ರಾರಂಭಿಸಿಲ್ಲ.

೩ ಪ್ರಶ್ನೆ ೨ಕ್ಕೆ ಕೊಟ್ಟಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಹುಬ್ಬಳ್ಳಿ ವಿಮಾನ ನಿಲ್ದಾಣದ ಬಗ್ಗೆ

೪೮೩. ಶ್ರೀ ಶಿವಾನಂದ ಎಚ್. ಕೌಜಲಗಿ (ಬೈಲಹೊಂಗಲ) —ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೋಸ್ಕರ ರಾಜ್ಯ ಸರ್ಕಾರದವರು ಎಷ್ಟು ಹಣ ಒದಗಿಸಿರುವರು ಮತ್ತು ಯಾವ ಯಾವ ಅನುಕೂಲತೆಗಳನ್ನು ಮಾಡಿಕೊಡಲಾಗಿದೆ;

ಆ) ಹುಬ್ಬಳ್ಳಿ ಧಾರವಾಡ ಕಾರ್ಪೊರೇಷನ್‌ದವರು ಈ ವಿಮಾನ ನಿಲ್ದಾಣ ಆಗಬೇಕೆಂಬ ಉದ್ದೇಶದಿಂದ ಯಾವ ಯಾವ ಸಹಾಯವನ್ನು ಮಾಡಿರುವರು;

ಇ) ಈ ವಿಮಾನ ನಿಲ್ದಾಣದಲ್ಲಿ ದೊಡ್ಡ ವಿಮಾನಗಳು ಇಳಿಯಲು ಸಾಧ್ಯವಿಲ್ಲದ್ದರಿಂದ ಈ ವಿಮಾನ ನಿಲ್ದಾಣವು ನಿರುಪಯುಕ್ತವಾಗುವುದು ನಿಜವೇ ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೋಸ್ಕರ ರಾಜ್ಯ ಸರ್ಕಾರದವರು ಇಲ್ಲಿಯವರೆಗೆ ರೂ ೨೦೭.೧೦ ಲಕ್ಷಗಳನ್ನು ಒದಗಿಸಿರುವರು. ಈ ವಿಮಾನ ನಿಲ್ದಾಣದಲ್ಲಿ ರನ್‌ವೇ ಟರ್ಮಿನಲ್ ಬ್ಲಾಕ್, ಟೆಕ್ನಿಕಲ್ ಬ್ಲಾಕ್ ಮತ್ತು ಕಂಟ್ರೋಲ್ ರೂಮ್ ಹಾಗೂ ಕಾರ್ ಪಾರ್ಕಿಂಗ್ ಮುಗಿದಿದ್ದು ರನ್‌ವೇ ಡಾಂಬರೀಕರಣ ಮತ್ತು ಸಿಬ್ಬಂದಿ ವಸತಿ ಗೃಹಗಳ ಕೆಲಸ ಪ್ರಗತಿಯಲ್ಲಿವೆ.